**All India Radio: Bangalore**
**National Bulletin In Kannada**
**01.07.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**01.07.2026 1.10 p.m.**

**<><><><>**

ಮುಖ್ಯಾಂಶಗಳು

1. ಡಿಜಿಟಲ್ ಇಂಡಿಯಾ ಕಾರ್ಯಕ್ರಮದ ೧೧ ವರ್ಷಗಳ ಸಾಧನೆ: ವಿಶ್ವದ ಒಂದು ಅತಿದೊಡ್ಡ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ವ್ಯವಸ್ಥೆ ನಿರ್ಮಿಸಿದ ಭಾರತ
2. ಇಂದಿನಿಂದ ೧೯ ಕೆಜಿ ತೂಕದ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ೧೮೩ ರೂಪಾಯಿ ೫೦ ಪೈಸೆ ಇಳಿಕೆ ಮಾಡಿದ ತೈಲ ಮಾರುಕಟ್ಟೆ ಕಂಪನಿಗಳು
3. ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ ೧೦ ವರ್ಷ: ನೀರಾವರಿ ವಿಸ್ತರಣೆ, ಜಲಸಂರಕ್ಷಣೆ, ಕೃಷಿ ಉತ್ಪಾದಕತೆ ಹೆಚ್ಚಳಕ್ಕೆ ಮಹತ್ವದ ಕೊಡುಗೆ
4. ಪಾಸ್‌ಪೋರ್ಟ್ ಸೇವೆಗಳ ಶುಲ್ಕ ಪರಿಷ್ಕರಣೆ ಇಂದಿನಿಂದ ಜಾರಿ
5. ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿ: ಇಂದು ಭಾರತ - ಇಂಗ್ಲೆಂಡ್ ನಡುವೆ ಮೊದಲ ಪಂದ್ಯ

<><><><>

ಡಿಜಿಟಲ್ ಇಂಡಿಯಾ ಕಾರ್ಯಕ್ರಮ ದೇಶದ ನಾಗರಿಕರು, ಪರಸ್ಪರ ಸಂಪರ್ಕ ಸಾಧಿಸುವ, ಕಲಿಯುವ, ಹಣಕಾಸು ವ್ಯವಹಾರ ನಡೆಸುವ ಹಾಗೂ ಸಾರ್ವಜನಿಕ ಸೇವೆಗಳನ್ನು ಪಡೆಯುವ ವಿಧಾನದಲ್ಲಿ ಮಹತ್ವದ ಪರಿವರ್ತನೆ ತಂದಿದೆ. ಕಳೆದ ೧೧ ವರ್ಷಗಳಲ್ಲಿ ಭಾರತವು, ವಿಶ್ವದ ಅತಿದೊಡ್ಡ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ - ವ್ಯವಸ್ಥೆ ನಿರ್ಮಿಸಿದೆ. ಆರೋಗ್ಯ, ಶಿಕ್ಷಣ, ಕೌಶಲ್ಯಾಭಿವೃದ್ಧಿ, ಕೃಷಿ ಹಾಗೂ ಕಲ್ಯಾಣ ಯೋಜನೆಗಳ ಸೇವೆಗಳು, ವಿಶೇಷವಾಗಿ ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳಲ್ಲಿ ಡಿಜಿಟಲ್ ವೇದಿಕೆಗಳ ಮೂಲಕ ವ್ಯಾಪಕವಾಗಿ ವಿಸ್ತರಿಸಿವೆ. ಭಾರತವು ನಾಗರಿಕ ಕೇಂದ್ರಿತ ಮತ್ತು ವಿಸ್ತರಣಾ ಸಾಮರ್ಥ್ಯ ಹೊಂದಿರುವ ಡಿಜಿಟಲ್ ಆಡಳಿತ ವ್ಯವಸ್ಥೆಗಳ ಮೂಲಕ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಕ್ಷೇತ್ರದಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮುತ್ತಿದೆ. ಪಾವತಿ ವ್ಯವಸ್ಥೆ, ದತ್ತಾಂಶ ವಿನಿಮಯ ಹಾಗೂ ಸೇವಾ ವಿತರಣೆಗೆ

ಸಂಬಂಧಿಸಿದ ಇಂಡಿಯಾ ಸ್ಟ್ಯಾಕ್ ಮತ್ತು ಡಿಪಿಐ ವ್ಯವಸ್ಥೆಗಳ ಸಹಕಾರಕ್ಕಾಗಿ ಭಾರತವು ೨೪ ದೇಶಗಳೊಂದಿಗೆ ಒಪ್ಪಂದಗಳಿಗೆ ಸಹಿ ಹಾಕಿದೆ.

ಯುಪಿಐ ಈಗ ಯುನೈಟೆಡ್ ಅರಬ್ ಎಮಿರೇಟ್ಸ್, ಸಿಂಗಾಪುರ, ಫ್ರಾನ್ಸ್, ಮಾರಿಷಸ್ ಹಾಗೂ ಶ್ರೀಲಂಕಾಸೇರಿದಂತೆ ಎಂಟಕ್ಕೂ ಹೆಚ್ಚು ದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಜಾಗತಿಕ ಹಣಕಾಸು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತದ ಸ್ಥಾನವನ್ನು ಮತ್ತಷ್ಟು ಬಲಪಡಿಸಿದೆ. ಆಧಾರ್, ಡಿಜಿಲಾಕರ್, ಸರ್ಕಾರಿ ಇ-ಮಾರುಕಟ್ಟೆ - ಜಿಇಎಂ, ದೀಕ್ಷಾ, ಉಮಂಗ್ ಹಾಗೂ ಇ-ಸಂಜೀವಿನಿ ಸೇರಿದಂತೆ ಭಾರತದ ಹಲವು ಡಿಜಿಟಲ್ ವೇದಿಕೆಗಳು ಜಾಗತಿಕ ಡಿಜಿಟಲ್ ಆಡಳಿತ ಮಾದರಿಗಳಿಗೆ ಪ್ರೇರಣೆಯಾಗುತ್ತಿವೆ. ೨೦೨೩ರ ಜಿ-೨೦ ಅಧ್ಯಕ್ಷತೆಯ ಅವಧಿಯಲ್ಲಿ ಭಾರತವು ಇಂಡಿಯಾ ಸ್ಟ್ಯಾಕ್ ಗ್ಲೋಬಲ್ ಹಾಗೂ ಜಾಗತಿಕ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ಆರಂಭಿಸುವ ಮೂಲಕ, ಭಾರತದ ಡಿಜಿಟಲ್ ವ್ಯವಸ್ಥೆಯನ್ನು ವಿಶ್ವದ ವಿವಿಧ ರಾಷ್ಟ್ರಗಳಿಗೆ ವಿಸ್ತರಿಸಿದೆ. ಡಿಜಿಟಲ್ ಇಂಡಿಯಾ ಕಾರ್ಯಕ್ರಮವು, ಎರಡನೇ ದಶಕಕ್ಕೆ ಕಾಲಿಡುತ್ತಿರುವ ಸಂದರ್ಭದಲ್ಲಿ, ಸಮಗ್ರ ಅಭಿವೃದ್ಧಿ, ಡಿಜಿಟಲ್ ಸಬಲೀಕರಣ ಹಾಗೂ ಜಾಗತಿಕ ಸಹಕಾರಕ್ಕೆ ತಂತ್ರಜ್ಞಾನವನ್ನು ಪರಿಣಾಮಕಾರಿ ಸಾಧನವನ್ನಾಗಿ ಬಳಸುವತ್ತ ಭಾರತ ಮುನ್ನಡೆಯುತ್ತಿದೆ.

<><><><>

ಡಿಜಿಟಲ್ ಇಂಡಿಯಾ ಕಾರ್ಯಕ್ರಮ, ಆಡಳಿತ ವ್ಯವಸ್ಥೆಗೆ ಹೊಸ ರೂಪ ನೀಡಿದ್ದು, ನಾಗರಿಕರನ್ನು ಸಬಲೀಕರಣಗೊಳಿಸಿ, ದೇಶದ ಸಮಗ್ರ ಅಭಿವೃದ್ಧಿಗೆ ವೇಗ ನೀಡಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಡಿಜಿಟಲ್ ಇಂಡಿಯಾ ಇಂದು ಜನಜೀವನದ ಪ್ರತಿಯೊಂದು ಕ್ಷೇತ್ರವನ್ನು ಸ್ಪರ್ಶಿಸಿದೆ. ತಡೆರಹಿತ ಡಿಜಿಟಲ್ ಪಾವತಿ ವ್ಯವಸ್ಥೆ ಹಾಗೂ ನೇರ ಲಾಭ ವರ್ಗಾವಣೆ ಯೋಜನೆಗಳ ಮೂಲಕ ಫಲಾನುಭವಿಗಳಿಗೆ ಪಾರದರ್ಶಕವಾಗಿ ಸೌಲಭ್ಯಗಳು ತಲುಪುತ್ತಿವೆ. ತಂತ್ರಜ್ಞಾನವು ಜನರ ಜೀವನವನ್ನು ಮತ್ತಷ್ಟು ಸುಲಭಗೊಳಿಸುವ ಪ್ರಬಲ ಸಾಧನವಾಗಿ ರೂಪುಗೊಂಡಿದೆ ಎಂದು ಅವರು ಹೇಳಿದ್ದಾರೆ.

<><><><>

ತೈಲ ಮಾರುಕಟ್ಟೆ ಕಂಪನಿಗಳು, ೧೯ ಕೆಜಿ ತೂಕದ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯನ್ನು ಇಂದಿನಿಂದ ೧೮೩ ರೂಪಾಯಿ ೫೦ ಪೈಸೆ ಕಡಿತಗೊಳಿಸಿವೆ. ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ಪ್ರಕಟಿಸಿರುವ ಮಾಹಿತಿ ಪ್ರಕಾರ, ಪರಿಷ್ಕೃತ ದರಗಳು ಇಂದಿನಿಂದಲೇ

ಜಾರಿಗೆ ಬಂದಿವೆ. ಬೆಲೆ ಇಳಿಕೆಯ ಬಳಿಕ, ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ೧೯ ಕೆಜಿ ತೂಕದ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ೨ ಸಾವಿರದ ೯೩೦ ರೂಪಾಯಿಗಳಿಗೆ ನಿಗದಿಯಾಗಿದೆ. ಈ ಬೆಲೆ ಇಳಿಕೆಯಿಂದ ರೆಸ್ಟೋರೆಂಟ್‌ಗಳು, ಡಾಬಾಗಳು, ಹೋಟೆಲ್‌ಗಳು ಹಾಗೂ ಆಹಾರ ಮತ್ತು ಪಾನೀಯ ಉದ್ಯಮದಲ್ಲಿ ತೊಡಗಿರುವವರಿಗೆ ಗಮನಾರ್ಹ ಪರಿಹಾರ ದೊರೆಯಲಿದೆ.

<><><><>

ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ - ಪಿಎಂಕೆಎಸ್‌ವೈ ಜಲಸಂಪನ್ಮೂಲಗಳ ಸುಸ್ಥಿರ ನಿರ್ವಹಣೆ ಹಾಗೂ ನೀರಾವರಿ ವ್ಯಾಪ್ತಿಯ ವಿಸ್ತರಣೆಯ ಮೂಲಕ ಕೃಷಿ ಕ್ಷೇತ್ರದಲ್ಲಿ ಮಹತ್ವದ ಪರಿವರ್ತನೆ ತಂದು ಯಶಸ್ವಿಯಾಗಿ ೧೦ ವರ್ಷ ಪೂರೈಸಿದೆ. ೨೦೧೫ರ ಜುಲೈ ೧ರಂದು ಆರಂಭಗೊಂಡ ಈ ಯೋಜನೆಯು, ರೈತರಿಗೆ ಖಾತರಿಯ ನೀರಾವರಿ ಸೌಲಭ್ಯ ಕಲ್ಪಿಸುವುದರ ಜೊತೆಗೆ, ಕೃಷಿ ಜಮೀನುಗಳಲ್ಲಿ ನೀರಿನ ಸಮರ್ಥ ಬಳಕೆಯನ್ನು ಉತ್ತೇಜಿಸಿ, ದೇಶಾದ್ಯಂತ ಸುಸ್ಥಿರ ಜಲಸಂರಕ್ಷಣೆಗೆ ಪ್ರೋತ್ಸಾಹ ನೀಡುತ್ತಿದೆ. ಕಳೆದ ಒಂದು ದಶಕದಲ್ಲಿ, **ಜಲ ಸಂಚಯ 'ಯೋಜನೆಯಡಿ ಮಳೆನೀರು ಸಂಗ್ರಹಣೆ ಹಾಗೂ 'ಜಲ ಸಿಂಚನ' ಯೋಜನೆಯಡಿ ಕೃಷಿ ಜಮೀನುಗಳಿಗೆ ನೀರನ್ನು ಸಮರ್ಥವಾಗಿ ಪೂರೈಸುವ ವ್ಯವಸ್ಥೆಗಳ ಮೂಲಕ ನೀರಾವರಿ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸಲಾಗಿದೆ. ೨೦೧೬-೧೭ನೇ ಸಾಲಿನಿಂದ, ೨ ಕೋಟಿ ೭೦ ಲಕ್ಷಕ್ಕೂ ಹೆಚ್ಚು ರೈತರು ಪ್ರಯೋಜನ ಪಡೆದಿದ್ದು, ೨ ಕೋಟಿ ೪೬ ಲಕ್ಷದ ೧೦ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ನೂತನ ನೀರಾವರಿ ಸಾಮರ್ಥ್ಯವನ್ನು ಸೃಷ್ಟಿಸಲಾಗಿದೆ.

<><><><>

ಇಂದಿನಿಂದ ಜಾರಿಗೆ ಬಂದಿರುವ ಪರಿಷ್ಕೃತ ಶುಲ್ಕ ವ್ಯವಸ್ಥೆಯೊಂದಿಗೆ ಪಾಸ್‌ಪೋರ್ಟ್ ಸಂಬಂಧಿತ ಸೇವೆಗಳ ಶುಲ್ಕವನ್ನು ಕೇಂದ್ರ ಸರ್ಕಾರ ಹೆಚ್ಚಿಸಿದೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯ ಜಾರಿಗೆ ತಂದಿರುವ ಹೊಸ ಶುಲ್ಕ ವ್ಯವಸ್ಥೆಯು, ಹೊಸ ಪಾಸ್‌ಪೋರ್ಟ್ ಅರ್ಜಿ, ನವೀಕರಣ, ತತ್ಕಾಲ್ ಸೇವೆ, ಕಳೆದುಹೋದ ಅಥವಾ ಹಾನಿಗೊಳಗಾದ ಪಾಸ್‌ಪೋರ್ಟ್‌ನ ಬದಲಿ ಪ್ರತಿ, ಪೊಲೀಸ್ ಕ್ಲಿಯರೆನ್ಸ್ ಪ್ರಮಾಣಪತ್ರ ಸೇರಿದಂತೆ ವಿವಿಧ ಪಾಸ್‌ಪೋರ್ಟ್ ಸೇವೆಗಳಿಗೆ ಅನ್ವಯವಾಗಲಿದೆ. ಭಾರತ ಹಾಗೂ ವಿದೇಶದಲ್ಲಿರುವ ಭಾರತೀಯ ರಾಯಭಾರ ಕಚೇರಿಗಳು ಮತ್ತು ವಾಣಿಜ್ಯ ದೂತಾವಾಸ ಕಚೇರಿಗಳ ಮೂಲಕ ಸಲ್ಲಿಸುವ ಅರ್ಜಿಗಳಿಗೂ ಈ ಪರಿಷ್ಕೃತ ಶುಲ್ಕ ಅನ್ವಯವಾಗಲಿದೆ.

<><><><>

ದೇಶಾದ್ಯಂತ ಇಂದು ರಾಷ್ಟ್ರೀಯ ವೈದ್ಯರ ದಿನ ಆಚರಿಸಲಾಗುತ್ತಿದೆ. ಸಾರ್ವಜನಿಕ ಆರೋಗ್ಯದ ರಕ್ಷಣೆ ಮತ್ತು ಸುಧಾರಣೆಗೆ ವೈದ್ಯರು ನೀಡಿರುವ ಸಮರ್ಪಣೆ, ಕರುಣೆ ಹಾಗೂ ಅಮೂಲ್ಯ ಕೊಡುಗೆಯನ್ನು ಗೌರವಿಸುವುದು ಈ ದಿನದ ಪ್ರಮುಖ ಉದ್ದೇಶ. ಭಾರತದ ಅತ್ಯಂತ ಗೌರವಾನ್ವಿತ ವೈದ್ಯರಲ್ಲಿ ಒಬ್ಬರಾದ ಡಾ. ಬಿಧಾನ್ ಚಂದ್ರ ರಾಯ್ ಅವರ ಜನ್ಮ ಹಾಗೂ ಪುಣ್ಯತಿಥಿಯ ಸ್ಮರಣಾರ್ಥವಾಗಿ ಪ್ರತಿ ವರ್ಷ ಜುಲೈ ೧ರಂದು ರಾಷ್ಟ್ರೀಯ ವೈದ್ಯರ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷದ ರಾಷ್ಟ್ರೀಯ ವೈದ್ಯರ ದಿನದ ಧ್ಯೇಯವಾಕ್ಯ "ಬಿಹೈಂಡ್ ದ ಮಾಸ್ಕ್: ಹೂ ಹೀಲ್ಸ್ ದ ಹೀಲರ್ಸ್" ಇತರರ ಆರೋಗ್ಯಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿರುವ ವೈದ್ಯರ ಮಾನಸಿಕ, ಭಾವನಾತ್ಮಕ ಹಾಗೂ ದೈಹಿಕ ಆರೋಗ್ಯ ಮತ್ತು ಯೋಗಕ್ಷೇಮಕ್ಕೂ ಸಮಾನ ಆದ್ಯತೆ ನೀಡುವ ಅಗತ್ಯವನ್ನು ಇದು ಒತ್ತಿಹೇಳುತ್ತದೆ.

<><><><>

ವೈದ್ಯರ ಕಠಿಣ ಪರಿಶ್ರಮ, ಕರುಣೆ ಹಾಗೂ ಸೇವಾ ಬದ್ಧತೆಯೇ ಭಾರತದ ಆರೋಗ್ಯ ವ್ಯವಸ್ಥೆಯ ಭದ್ರ ಅಡಿಪಾಯವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ರಾಷ್ಟ್ರೀಯ ವೈದ್ಯರ ದಿನದ ಹಿನ್ನೆಲೆ ಸಮಾಜಿಕ ಮಾಧ್ಯಮದಲ್ಲಿ ಪ್ರಧಾನಿ, ಅತ್ಯಂತ ಸವಾಲಿನ ಪರಿಸ್ಥಿತಿಗಳಲ್ಲಿಯೂ ವೈದ್ಯರು ಸಲ್ಲಿಸುತ್ತಿರುವ ದಣಿವರಿಯದ ಸೇವೆ, ದೇಶದ ಕೋಟ್ಯಂತರ ಜನರ ವಿಶ್ವಾಸ ಮತ್ತು ಕೃತಜ್ಞತೆಗೆ ಪಾತ್ರವಾಗಿದೆ ಎಂದು ತಿಳಿಸಿದ್ದಾರೆ. ಕಳೆದ ಒಂದು ದಶಕದಲ್ಲಿ ದೇಶದ ಆರೋಗ್ಯ ಸೇವಾ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಭಾರತ ಮಹತ್ವದ ಪ್ರಗತಿ ಸಾಧಿಸಿದೆ ಎಂದು ಪ್ರಧಾನಮಂತ್ರಿ ಹೇಳಿದ್ದಾರೆ. ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎರಡು ಪಟ್ಟು ಹೆಚ್ಚಾಗಿದ್ದು, ಪದವಿ ಹಾಗೂ ಸ್ನಾತಕೋತ್ತರ ವೈದ್ಯಕೀಯ ಸೀಟುಗಳ ಸಂಖ್ಯೆಯಲ್ಲಿಯೂ ಗಣನೀಯ ಏರಿಕೆಯಾಗಿದೆ. ಈ ಅಭೂತಪೂರ್ವ ಬೆಳವಣಿಗೆಯು, ವೈದ್ಯಕೀಯ ಶಿಕ್ಷಣ ಪಡೆಯಲು ಬಯಸುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವುದರ ಜೊತೆಗೆ, ಆರೋಗ್ಯ ಕ್ಷೇತ್ರದ ಮಾನವ ಸಂಪನ್ಮೂಲವನ್ನು ಬಲಪಡಿಸಿ, ಗುಣಮಟ್ಟದ ವೈದ್ಯಕೀಯ ಸೇವೆಯನ್ನು ದೇಶದ ಮೂಲೆಮೂಲೆಗೂ ತಲುಪಿಸಲು ನೆರವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ವಿಕಸಿತ ಭಾರತ ನಿರ್ಮಾಣದತ್ತ ಸರ್ಕಾರ ಕಾರ್ಯನಿರ್ವಹಿಸುತ್ತಿರುವ ಸಂದರ್ಭದಲ್ಲಿ, ಆರೋಗ್ಯ ಸೇವೆಯ ಉತ್ತೇಜನ, ವೈದ್ಯಕೀಯ ಸಂಶೋಧನೆಗೆ ವೇಗ, ನವೋದ್ಯಮಗಳ ಅಳವಡಿಕೆ ಹಾಗೂ ಎಲ್ಲರಿಗೂ ಕೈಗೆಟುಕುವ ಮತ್ತು

ಸುಲಭವಾಗಿ ಲಭ್ಯವಾಗುವ ಆರೋಗ್ಯ ಸೇವೆ ಒದಗಿಸುವಲ್ಲಿ ದೇಶದ ವೈದ್ಯರು ಮುಂದೆಯೂ ನಿರ್ಣಾಯಕ ಪಾತ್ರ ವಹಿಸಲಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><><><>

ರಾಷ್ಟ್ರೀಯ ವೈದ್ಯರ ದಿನದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಸೇರಿದಂತೆ ಗಣ್ಯರು ಸಮಸ್ತ ವೈದ್ಯ ಸಮುದಾಯಕ್ಕೆ ಶುಭಾಶಯ ಕೋರಿದ್ದಾರೆ.

<><><><>

ದೇಶದಲ್ಲಿ ಕಳೆದ ಜೂನ್ ತಿಂಗಳ ಸರಕು ಮತ್ತು ಸೇವಾ ತೆರಿಗೆ - ಜಿಎಸ್‌ಟಿ ಸಂಗ್ರಹ, ೧ ಲಕ್ಷ ೯೪ ಸಾವಿರದ ೮೧೨ ಕೋಟಿ ರೂಪಾಯಿಗೆ ತಲುಪಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ ಜಿಎಸ್‌ಟಿ ಸಂಗ್ರಹ ೧ ಲಕ್ಷ ೭೧ ಸಾವಿರ ೧೦೫ ಕೋಟಿ ರೂಪಾಯಿ ಆಗಿತ್ತು. ಕಳೆದ ವರ್ಷದ ಈ ಅವಧಿಗೆ ಹೋಲಿಸಿದರೆ ಶೇಕಡಾ ೧೩.೯ರಷ್ಟು ಏರಿಕೆ ದಾಖಲಿಸಿದೆ.

<><><><>

ಇಂಗ್ಲೆಂಡ್‌ನ ಚೆಸ್ಟರ್ ಲೆ ಸ್ಟ್ರೀಟ್‌ನ ರಿವರ್‌ಸೈಡ್ ಮೈದಾನದಲ್ಲಿ ಇಂದು ನಡೆಯಲಿರುವ ೫ ಪಂದ್ಯಗಳ ಸರಣಿಯ ಪುರುಷರ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್‌ನ ಮೊದಲ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ತಂಡಗಳು ಸೆಣಸಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦ ಗಂಟೆಗೆ ಆರಂಭವಾಗಲಿದೆ. ಟಿ-೨೦ ಸರಣಿಯ ನಂತರ, ಭಾರತ ತಂಡ, ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯಲ್ಲಿ ಇಂಗ್ಲೆಂಡ್ ಅನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>